## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶ್ರೀರಂಗಪಟ್ಟಣ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 76/2020

**ಚಾ.ಸಾ. :-1**
**ಪ್ರಾ.ಸಾ. :-2**

ಹೆಸರು : ಪವನ್ ಕುಮಾರ್

ತಂದೆಯ ಹೆಸರು : ಪ್ರಕಾಶ್

ವಯಸ್ಸು : 21 ವರ್ಷ

ಉದ್ಯೋಗ : ಖಾಸಗಿ ಕೆಲಸ

ವಾಸಸ್ಥಳ : ಬೆಂಗಳೂರು

---

**ಪ್ರಮಾಣೀಕರಿಸಲಾದ ದಿನಾಂಕಃ- 12.01.2026**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ಅಭಿಲಾಷ್ ಗೌಡ ನನ್ನ ಸ್ನೇಹಿತ. ದಿನಾಂಕಃ 06.06.2020 ರಂದು ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ರಾತ್ರಿ ಸುಮಾರು 7.30-8.00 ಗಂಟೆ ಸಮಯದಲ್ಲಿ ನಾನು ಮತ್ತು ಅಭಿಲಾಷ್ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದೆವು. ಅಭಿಲಾಷ್ ದ್ವಿಚಕ್ರ ವಾಹನವನ್ನು ಚಾಲನೆ ಮಾಡುತ್ತಿದ್ದ. ರುಚಿಮನೆ ಹೋಟೆಲ್ ಬಳಿ ರಸ್ತೆಯಲ್ಲಿ ಎಡಭಾಗದಿಂದ ಬಲಭಾಗಕ್ಕೆ ಹಾಗೂ ಬಲಭಾಗದಿಂದ ಎಡಭಾಗಕ್ಕೆ ಟಿಪ್ಪರ್ ಲಾರಿ ಅಡ್ಡದಿಡ್ಡಿಯಾಗಿ ಸುಮಾರು 70-80 ಕಿ.ಮೀ. ವೇಗದಲ್ಲಿ ಹೋಗುತ್ತಿತ್ತು. ನಂತರ ಅವರು ತಕ್ಷಣ ಬ್ರೇಕ್ ಹಾಕಿದ್ದು, ಅಭಿಲಾಷ್ ರವರು ಸದರಿ ಲಾರಿಗೆ ಹಿಂಭಾಗದಿಂದ ಗುದ್ದಿರುತ್ತಾರೆ. ಅಭಿಲಾಷ್ ರವರು ಸಹ ದ್ವಿಚಕ್ರ ವಾಹನವನ್ನು ವೇಗವಾಗಿ ಓಡಿಸುತ್ತಿದ್ದ ಕಾರಣ ನಿಯಂತ್ರಿಸಲು ಆಗದೇ ಲಾರಿಗೆ ಗುದ್ದಿರುತ್ತಾರೆ. ಲಾರಿಯನ್ನು ನಿಲ್ಲಿಸುವಾಗ ಅವರು ಯಾವುದೇ ಸೂಚನೆಯನ್ನು ನೀಡಿರುವುದಿಲ್ಲ. ಅಪಘಾತದಲ್ಲಿ ಅಭಿಲಾಷ್

ರವರು ಸ್ಥಳದಲ್ಲೇ ಮೃತಪಟ್ಟಿರುತ್ತಾರೆ, ನನಗೆ ಗಾಯಗಳಾಗಿರುತ್ತವೆ. ನಂತರ ನಮ್ಮನ್ನು ಆಸ್ಪತ್ರೆಗೆ ದಾಖಲು ಮಾಡಿರುತ್ತಾರೆ.

ಅಪಘಾತದ ಬಗ್ಗೆ ಪೊಲೀಸರಿಗೆ ಆಸ್ಪತ್ರೆಯಲ್ಲಿ ಹೇಳಿಕೆ ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗ ನಿಪಿ-1 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು.

ಸಾಕ್ಷಿಯ ಸಹಿ ಇರುವ ಇನ್ನೊಂದು ದಾಖಲೆಯು ಸ್ಥಳ ಮಹಜರ್ ಆಗಿದ್ದು, ಅದನ್ನು ಈಗ ನಿಪಿ-2 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರ್ತಿಸಲಾಯಿತು. ಈಗ ನೋಡುತ್ತಿರುವ ಫೋಟೋವನ್ನು ಪೊಲೀಸರು ಅಪಘಾತ ಸ್ಥಳದಲ್ಲಿ ತೆಗೆದಿರುತ್ತಾರೆ. ಸದರಿ ಫೋಟೋಗಳನ್ನು ಒಟ್ಟಾಗಿ ನಿಪಿ-3 ಎಂದು ಗುರ್ತಿಸಲಾಯಿತು.

ಸಾಕ್ಷಿಯ ಸಹಿ ಇರುವ ಇನ್ನೊಂದು ದಾಖಲೆಯು ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗ ನಿಪಿ-4 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರ್ತಿಸಲಾಯಿತು. ಈಗ ನೋಡುತ್ತಿರುವ ಫೋಟೋವನ್ನು ಪೊಲೀಸರು ಮಹಜರ್ ಸಮಯದಲ್ಲಿ ತೆಗೆದಿರುತ್ತಾರೆ. ಸದರಿ ಫೋಟೋಗಳನ್ನು ಒಟ್ಟಾಗಿ ನಿಪಿ-5 ಎಂದು ಗುರ್ತಿಸಲಾಯಿತು. ಮಹಜರ್ ಸಮಯದಲ್ಲಿ ಪೊಲೀಸರು ಏನನ್ನೂ ಅಮಾನತ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :**

ನಿಪಿ-5 ರಲ್ಲಿ ಕಾಣುವ ದ್ವಿಚಕ್ರ ವಾಹನ ಹಾಗೂ ಟಿಪ್ಪರ್ ಲಾರಿಯನ್ನು ಅಪಘಾತಕ್ಕೆ ಸಂಬಂಧಿಸಿದಂತೆ ಪೊಲೀಸರು ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ನೆನಪಿಲ್ಲ. ನಿಪಿ-5 ರಲ್ಲಿ ನನ್ನ ಭಾವಚಿತ್ರ ಇದೆ ಎಂದರೆ ಸರಿ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ನಾವು ಆ ದಿನ ಸಂಜೆ ಸುಮಾರು 4.30 ರ ಸಮಯದಲ್ಲಿ ಬೆಂಗಳೂರಿನಿಂದ ಹೊರಟಿರುತ್ತೇವೆ. ಆ ಸಮಯದಲ್ಲಿ ಸದರಿ ರಸ್ತೆಯಲ್ಲಿ ಹೆಚ್ಚು ವಾಹನ ದಟ್ಟಣೆ ಇರುತ್ತದೆ ಎಂದರೆ ಸರಿ. ಆ ಸಮಯದಲ್ಲಿ ವೇಗವಾಗಿ ವಾಹನ ಚಾಲನೆ ಮಾಡಿದರೆ ಅಪಘಾತವಾಗುವ ಸಾಧ್ಯತೆ ಇರುತ್ತದೆ ಎಂದರೆ ಸರಿ. ಲಾರಿ ಮತ್ತು ಟಿಪ್ಪರ್ ನಡುವೆ ವ್ಯತ್ಯಾಸವಿರುತ್ತದೆ ಎಂದರೆ ಸರಿ. ನಿಪಿ-5 ರಲ್ಲಿ ಟಿಪ್ಪರ್ ಲಾರಿ ಹಾಗೂ ನಮ್ಮ ವಾಹನ ಕಾಣಿಸುತ್ತವೆ ಎಂದರೆ ಸರಿ. ಲಾರಿ ಮತ್ತು ನಮ್ಮ ದ್ವಿಚಕ್ರ ವಾಹನದ ನಡುವೆ ಸುಮಾರು 20-30 ಮೀ.ಅಂತರವಿತ್ತು. ನಮ್ಮ ದ್ವಿಚಕ್ರ ವಾಹನವನ್ನು ವೇಗವಾಗಿ ಓಡಿಸಿದರೆ ಅದು ತಕ್ಷಣ ನಿಯಂತ್ರಣಕ್ಕೆ ಬರುವುದಿಲ್ಲ ಎಂದರೆ ಸರಿ.

ಶ್ರೀರಂಗಪಟ್ಟಣ ಆಸ್ಪತ್ರೆಯಲ್ಲಿ ನಿಪಿ-1 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ನಂತರದಲ್ಲಿ ನಾನು ಪೊಲೀಸ್ ಠಾಣೆಗೆ ಹೋಗಿಲ್ಲ ಎಂದರೆ ಸರಿ. ಸದರಿ ಲಾರಿಯ ಒಳಗೆ ಯಾವುದೇ ಸರಕು ಇರಲಿಲ್ಲ. ಅಪಘಾತದ ಸಮಯದಲ್ಲಿ ಕತ್ತಲೆಯಾಗಿತ್ತು.

ವಿಮೆ ಪರಿಹಾರ ಕೋರಿ ನಾನು ಅರ್ಜಿ ಸಲ್ಲಿಸಿಲ್ಲ. ವಿಮೆ ಪರಿಹಾರ ಪಡೆಯಲು ಸುಳ್ಳು ದೂರು ದಾಖಲು ಮಾಡಿ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಆ ದಿನ ಅಜಾಗರೂಕತೆಯಿಂದ ವಾಹನ ಚಾಲನೆ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಅಭಿಲಾಷ್ ರವರಿಗೆ ವಾಹನ ಚಾಲನೆ ಮಾಡಲು ಬರುತ್ತಿರಲಿಲ್ಲ ಹಾಗಾಗಿ

ಅವರೇ ಅತಿವೇಗವಾಗಿ ಅಜಾಗರೂಕತೆಯಿಂದ ಚಾಲನೆ ಮಾಡಿ ರಸ್ತೆಯ ಎಡಭಾಗದಲ್ಲಿ ಹೋಗುತ್ತಿದ್ದ ಲಾರಿಗೆ ಹಿಂದಿನಿಂದ ಡಿಕ್ಕಿಪಡಿಸಿರುತ್ತಾರೆ ಎಂದರೆ ಸುಳ್ಳು.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**